# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ


ಮುಖ್ಯ ಆಯುಕ್ತರವರ ಕಛೇರಿ, ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು, ಬೆಂಗಳೂರು-560 002

ಸಂಖ್ಯೆ: ಬಿ12(ಸಿ1)/ಸಿಜಿ/ಪಿಆರ್/29/2024-2025
Eoffice No. 45336

ದಿನಾಂಕ: 27.9.24

## ನೇಮಕಾತಿ ಆದೇಶ

ವಿಷಯ: ದಿವಂಗತ ಶ್ರೀ ವೆಂಕಟರಾಯ ಪೌರಕಾರ್ಮಿಕರು ಬಿಲ್ಲೆ ಸಂಖ್ಯೆ: 8117 ರವರ ಮಗನಾದ ಶ್ರೀ ಮಂಜುನಾಥ. ವಿ, ರವರನ್ನು ಅನುಕಂಪದ ಆಧಾರದ ಮೇಲೆ ನಾಲ್ಕನೇ ದರ್ಜೆ ನೌಕರರು ಹುದ್ದೆಗೆ ನೇಮಕಾತಿ ಮಾಡುವ ಬಗ್ಗೆ.



1) ಸರ್ಕಾರಿ ಆದೇಶದ ಪತ್ರ ಸಂಖ್ಯೆ: ಡಿಪಿಎಆರ್ 100 ಎಸ್‌ಸಿಎ 95, ದಿ: 12-09-1996.
2) ಸದರಿ ಅರ್ಜಿದಾರರ ಮನವಿ ಪತ್ರದ ದಿನಾಂಕ:02-06-2023.
3) ಪೊಲೀಸ್ ಮಹಜರ್ ಸಿಎಸ್ ಬಿ/ಎಸ್.ಜಿ/200/2023 ರವರ ದೃಢೀಕರಣ ಪತ್ರ ದಿ:15-03-2023.
4) ಸಹಾಯಕ ಕಂದಾಯ ಅಧಿಕಾರಿ (ಹೂಡಿ ಉಪ ವಲಯ) ರವರ ಸ್ಥಳ ಮಹಜರ್ ವರದಿ ದಿ:07-07-2023
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ಶಿವಾಜಿನಗರ ರವರ ಸ್ಥಳ ಮಹಜರ್ ವರದಿ ದಿ:26-07-2023
6) ಜಂಟಿ ಆಯುಕ್ತರು (ಪೂರ್ವ) ರವರ ಅಧ್ಯಕ್ಷತೆಯಲ್ಲಿ ದಿ:30-10-2023 ರಂದು ನಡೆದ ಅನುಕಂಪದ ಆಧಾರದ ನೇಮಕಾತಿ ಸಮಿತಿಯ ನಡವಳಿಗಳು.
7) ಉಪ ಆಯುಕ್ತರು (ಆಡಳಿತ) ರವರ ಅಧ್ಯಕ್ಷತೆಯಲ್ಲಿ ದಿ:07-12-2023 ರಂದು ನಡೆದ ಅನುಕಂಪದ ಆಧಾರದ ನೇಮಕಾತಿ ಸಮಿತಿಯ ನಡವಳಿಗಳು.
8) ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯಮಾಪನ ಮಂಡಳಿ ರವರ ಪತ್ರ ದಿ:06-01-2024

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಅನುಕಂಪದ ಆಧಾರದ ನೇಮಕಾತಿ ಕೋರಿ ಸಲ್ಲಿಸಲಾದ ಮನವಿಯನ್ನು ಪರಿಶೀಲಿಸಿ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ಶಿವಾಜಿನಗರ ಉಪ ವಿಭಾಗ ರವರ ವರದಿಯಲ್ಲಿ, ದಿವಂಗತ ಶ್ರೀ ವೆಂಕಟರಾಯ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ಶಿವಾಜಿನಗರ ಉಪ ವಿಭಾಗ ಕಛೇರಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಪೌರಕಾರ್ಮಿಕರು ಬಿಲ್ಲೆ ಸಂಖ್ಯೆ 8117 ರವರು ಸೇವೆಯಲ್ಲಿರುವಾಗಲೇ ಮೃತರಾಗಿದ್ದು, ಸದರಿಯವರ ಮಗನಾದ ಶ್ರೀ ಮಂಜುನಾಥ. ವಿ ರವರು 10ನೇ ತರಗತಿ ವಿದ್ಯಾರ್ಹತೆ ಹೊಂದಿರುವುದರಿಂದ ಗ್ರೂಫ್ 'ಡಿ' ಹುದ್ದೆಯಾದ ಜವಾನರು ಹುದ್ದೆಯಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡಲು ಸಮಿತಿಯು ಶಿಫಾರಸ್ಸು ಮಾಡಿರುತ್ತದೆ.

ಉಪ ಆಯುಕ್ತರು (ಆಡಳಿತ) ರವರ ಅಧ್ಯಕ್ಷತೆಯಲ್ಲಿ ದಿನಾಂಕ:07-12-2022 ರಂದು ನಡೆದ ಅನುಕಂಪದ ಆಧಾರದ ಮೇಲೆ ನೇಮಕಾತಿ ಅಂತಿಮ ಪರಿಶೀಲನಾ ಸಮಿತಿಯಲ್ಲಿ ಶ್ರೀ ಮಂಜುನಾಥ. ವಿ ರವರನ್ನು ಗ್ರೂಫ್ 'ಡಿ' ಹುದ್ದೆಯಾದ ಜವಾನರು ಹುದ್ದೆಯಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿ ನೀಡಲು ತೀರ್ಮಾನಿಸಲಾಗಿರುತ್ತದೆ. ಸದರಿ ಸಮಿತಿಯ ತೀರ್ಮಾನದ ನಡವಳಿಯನ್ನು ನೇಮಕಾತಿ ಪ್ರಾಧಿಕಾರಿಯಾದ ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕ, ಬೆಂಗಳೂರು ರವರು ಅನುಮೋದಿಸಿರುತ್ತಾರೆ.

ಶ್ರೀ ಮಂಜುನಾಥ. ವಿ ಬಿನ್ ದಿವಂಗತ ಶ್ರೀ ವೆಂಕಟರಾಯ ರವರ ವಿವರಗಳು ಈ ಕೆಳಕಂಡಂತೆ ಇರುತ್ತವೆ.

| | | |
|---|---|---|
| 1. | ಹೆಸರು | ಶ್ರೀ ಮಂಜುನಾಥ. ವಿ |
| 2. | ಜನ್ಮ ದಿನಾಂಕ | 14-06-1989 (ಎಸ್.ಎಸ್.ಎಲ್.ಸಿ ಅಂಕಪಟ್ಟಿಯಲ್ಲಿರುವಂತೆ, ರಿ.ನಂ.20060754966) |
| 3. | ವಿಳಾಸ | ನಂ.65/1, ಭೈರತಿ, ಬಿದರಹಳ್ಳಿ ಹೋಬಳಿ, ಬೆಂಗಳೂರು (ಪೂರ್ವ), - 560077 |
| 4. | ಪ್ರವರ್ಗ | ಪ.ಜಾ. (ಆದಿ ಕರ್ನಾಟಕ) (ದಿ: 24-07-2014 ರಂದು ತಹಶೀಲ್ದಾರ್, ಬೆಂಗಳೂರು ಪೂರ್ವ ತಾಲ್ಲೂಕು ರವರು ವಿತರಿಸಿರುವ ಜಾತಿ ಪ್ರಮಾಣ ಪತ್ರದಂತೆ) |

ಉಲ್ಲೇಖ-(1)ರ ಸರ್ಕಾರಿ ಆದೇಶದ ಅನ್ವಯ ಹಾಗೂ ಉಲ್ಲೇಖ-(2) ರಿಂದ (5)ರ ವರೆಗಿನ ದಾಖಲಾತಿಗಳು ಮತ್ತು ವರದಿಗಳನ್ನಾಧರಿಸಿ ಉಲ್ಲೇಖ-(6)ರ ಮತ್ತು (7)ರ ಸಭೆ ನಡವಳಿಗಳ ತೀರ್ಮಾನದಂತೆ, ದಿವಂಗತ ಶ್ರೀ ವೆಂಕಟರಾಯ, ಪೌರಕಾರ್ಮಿಕರು (ಶಿವಾಜಿನಗರ) ರವರ ಮಗನಾದ ಶ್ರೀ ಮಂಜುನಾಥ. ವಿ ರವರನ್ನು ಅನುಕಂಪದ ಆಧಾರದ ಮೇಲೆ ವೇತನ ಶ್ರೇಣಿ ರೂ. 27,000 – 46,675 ರಲ್ಲಿ ಗ್ರೂಪ್ "ಡಿ" ಜವಾನರು ಹುದ್ದೆಗೆ ಈ ಕೆಳಕಂಡ ಷರತ್ತಿಗಳಿಗೊಳಪಡಿಸಿ ನೇಮಕಾತಿ ಮಾಡಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕೆಲಸ ಕಾರ್ಯಗಳ ಹಿತದೃಷ್ಟಿಯಿಂದ ಖಾಲಿ ಇರುವ ಕಾರ್ಯಪಾಲಕ ಅಭಿಯಂತರರು (ಯೋಜನೆ-ಪೂರ್ವ)ರವರ ಕಛೇರಿಯಲ್ಲಿ ಕಾರ್ಯನಿರ್ವಹಿಸಲು ಆದೇಶಿಸಲಾಗಿದೆ.

ಷರತ್ತುಗಳು:

1) ಶ್ರೀ ಮಂಜುನಾಥ. ವಿ ಬಿನ್ ದಿವಂಗತ ಶ್ರೀ ವೆಂಕಟರಾಯ, ಇವರು ಗ್ರೂಪ್ "ಡಿ" ಜವಾನರು ಹುದ್ದೆಗೆ ಈ ಪತ್ರ ತಲುಪಿದ 7 ದಿವಸಗಳೊಳಗಾಗಿ, ದೇಹದಾರ್ಢ್ಯತೆ ಪತ್ರ, ಎಸ್.ಎಸ್.ಎಲ್.ಸಿ ಅಂಕಪಟ್ಟಿ ಪ್ರಮಾಣ ಪತ್ರ ಮತ್ತು ಇತರೇ ಮೂಲ ದಾಖಲಾತಿಗಳೊಂದಿಗೆ ಕಾರ್ಯಪಾಲಕ ಅಭಿಯಂತರರು (ಯೋಜನೆ-ಪೂರ್ವ)ರವರ ಕಛೇರಿಯಲ್ಲಿ ಕರ್ತವ್ಯಕ್ಕೆ ಹಾಜರಾಗತಕ್ಕದ್ದು. ಕರ್ತವ್ಯಕ್ಕೆ ಹಾಜರಾದ ಕೂಡಲೇ ಚರಾಸ್ತಿಗಳ ಮತ್ತು ಸ್ಥಿರಾಸ್ತಿಗಳ ವಿವರಣೆಯನ್ನು ತೋರಿಸುವ ಪಟ್ಟಿಯನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ಸಲ್ಲಿಸತಕ್ಕದ್ದು.

2) ಈ ನೇಮಕಾತಿಯು 1977ರ ಕರ್ನಾಟಕ ನಾಗರಿಕ ಸೇವೆಗಳು (ಪ್ರೊಬೇಷನರಿ) ನಿಯಮಾವಳಿಯಂತೆ 2 ವರ್ಷಗಳ ಪರೀಕ್ಷಾರ್ಥ ಅವಧಿಗೆ ಒಳಪಟ್ಟಿರುತ್ತದೆ. ಈ ಅವಧಿಯಲ್ಲಿ ತೃಪ್ತಿಕರ ಸೇವೆ ಸಲ್ಲಿಸಿ, ನಿಗಧಿತ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಪಾಸು ಮಾಡುವುದು ಕಡ್ಡಾಯಗೊಳಿಸಲಾಗಿದೆ ಹಾಗೂ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣ / ವಿನಾಯಿತಿ ಪಡೆದು, ಪರೀಕ್ಷಾರ್ಥ ಸೇವಾ ಅವಧಿಯನ್ನು ಘೋಷಿಸಿಕೊಳ್ಳುವುದು.

3) ಸರ್ಕಾರದ ಅಥವಾ ಸರ್ಕಾರದಿಂದ ಅಂಗೀಕೃತ ಹೊಂದಿದ ಸಂಸ್ಥೆಯಿಂದ ಒಂದು ವರ್ಷದ ಅವಧಿಯೊಳಗೆ ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 43 ಎಸ್ ಸಿಆರ್ 2008, ದಿನಾಂಕ: 18- 12-2012ರ ಆದೇಶದಂತೆ ಕಂಪ್ಯೂಟರ್ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ, ಪ್ರಮಾಣ ಪತ್ರವನ್ನು ಸಲ್ಲಿಸುವುದು.

4) ಸದರಿಯವರು ಷರತ್ತು 2 ಮತ್ತು 3ನ್ನು ಪರೀಕ್ಷಾರ್ಥ ಅವಧಿ ಪೂರೈಸದಿದ್ದಲ್ಲಿ 1977ರ ಕರ್ನಾಟಕ ನಾಗರಿಕ ಸೇವೆಗಳು (ಪ್ರೊಬೇಷನರಿ) ನಿಯಮಾವಳಿಗಳ ನಿಯಮ 5(1)(ಬಿ) ರನ್ವಯ ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡಲಾಗುವುದೆಂದು ತಿಳಿಯುವುದು.

5) ಈ ನೇಮಕಾತಿಯನ್ನು ಪಡೆಯಲು ಅಭ್ಯರ್ಥಿಯು ಯಾವುದಾದರೂ ನಕಲು ಇಲ್ಲವೇ ಫೋರ್ಜರಿ ದಾಖಲಾತಿಗಳನ್ನು ಅಥವಾ ಸುಳ್ಳು ಮಾಹಿತಿಯನ್ನು ಸಲ್ಲಿಸಿರುವುದು ದೃಢಪಟ್ಟಲ್ಲಿ 2020ರ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ (ಅಧಿಕಾರಿ ಮತ್ತು ನೌಕರರುಗಳ ಸಾಮಾನ್ಯ ವೃಂದ ಮತ್ತು ನೇಮಕಾತಿ) ನಿಯಮಗಳು, 1977ರ ಸಾಮಾನ್ಯ ನೇಮಕಾತಿ ನಿಯಮಾವಳಿ ನಿಯಮ (20), 1977ರ ಕರ್ನಾಟಕ ಮುನಿಸಿಪಲ್ ನಿಯಮಾವಳಿ ನಿಯಮ (25)ರ ರೀತ್ಯಾ ನೇಮಕಾತಿ ಹೊಂದುವ ಸಲುವಾಗಿ ಸುಳ್ಳು ದಾಖಲಾತಿಗಳನ್ನು ಸೃಷ್ಟಿಸಿ ನಗರ ಪಾಲಿಕೆಗೆ ವಂಚಿಸಿರುತ್ತಾರೆಂದು ಭಾವಿಸಿ, 1957ರ ಕರ್ನಾಟಕ ನಾಗರಿಕ ಸೇವೆಗಳು (ವರ್ಗೀಕರಣ, ನಿಯಂತ್ರಣ ಮತ್ತು ಅಪೀಲು) ನಿಯಮಾವಳಿಯ ನಿಯಮ 11ರ ರೀತಿ ನೇಮಕಾತಿ ಆದೇಶವನ್ನು ರದ್ದುಪಡಿಸಲಾಗುವುದು ಹಾಗೂ ಕ್ರಿಮಿನಲ್ ಮೊಕದ್ದಮೆಯನ್ನು ಹೂಡಲಾಗುವುದೆಂದು ತಿಳಿಯುವುದು.

6) ಪಿಂಚಣಿಗೆ ಸಂಬಂಧಿಸಿದಂತೆ ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ (ಎಸ್‌ಪಿಎಲ್) 04 ಪಿಇಟಿ 2005, ದಿನಾಂಕ: 31-03-2006 ರಂತೆ, ಎನ್.ಪಿ.ಎಸ್ ಗೆ ಅರ್ಹರಿರುತ್ತೀರಿ.

7) ಸದರಿಯವರು ಅಗತ್ಯ ದಾಖಲೆಗಳನ್ನು ಕೂಡಲೇ ಒದಗಿಸಿ ನೂತನ ಪಿಂಚಣಿ ಯೋಜನೆಯಲ್ಲಿ ನೊಂದಾಯಿಸಲು ಸೂಚಿಸಿದೆ ಹಾಗೂ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು PRAN ಸಂಖ್ಯೆ ಸೃಜಿಸಲು ಹಾಗೂ ಕಟಾವಣೆಗೆ ಅಗತ್ಯ ಕ್ರಮಕೈಗೊಳ್ಳಲು ಸೂಚಿಸಿದೆ.

ಮಾನ್ಯ ಮುಖ್ಯ ಆಯುಕ್ತರವರ ಆದೇಶದಂತೆ)

27/9

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

24/09/2024
24-09-2024

ಪ್ರತಿಯನ್ನು : ಮಾನ್ಯ ಆಡಳಿತಗಾರರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ.
: ಕಾರ್ಯಪಾಲಕ ಅಭಿಯಂತರರು (ಯೋಜನೆ-ಪೂರ್ವ) ರವರ ಕಛೇರಿಗೆ ಅಭ್ಯರ್ಥಿಯ ಭಾವಚಿತ್ರದೊಂದಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
: ಕಾರ್ಯಪಾಲಕ ಅಭಿಯಂತರರು (ಯೋಜನೆ-ಪೂರ್ವ)ರವರ ಅವಗಾಹನೆಗೆ ತರಲು ಆಪ್ತಶಾಖೆಗೆ ಕಳುಹಿಸಿದೆ
: ಸಹಾಯಕ ಕಾರ್ಯಪಾಲಕ ಅಭಿಯಂತರರು (ಫ.ತ್ಯಾ.ನಿ) ಶಿವಾಜಿನಗರ ರವರಿಗೆ ಮೃತ ನೌಕರರ ಸೇವಾಪುಸ್ತಕದೊಂದಿಗೆ ಕಳುಹಿಸಿದೆ.
: ಸಹಾಯಕ ಆಯುಕ್ತರು (ನೇಮಕಾತಿ ಮತ್ತು ವಿಚಾರಣೆ) ವಿಭಾಗ ರವರಿಗೆ ಕಳುಹಿಸಿದೆ.
: ಮು.ಲೆ.ಅ/ಮು.ಲೆ.ಪ/ಉ.ನಿ. (ಹಣಕಾಸು- ಪೂರ್ವ) ರವರಿಗೆ ಕಳುಹಿಸಿದೆ.
: ಮಾಹಿತಿ ಮತ್ತು ತಂತ್ರಜ್ಞಾನ ಸಲಹೆಗಾರರಿಗೆ ಕಳುಹಿಸುತ್ತಾ ಪಾಲಿಕೆಯ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಚಿಸಿದೆ.
: ಅಭ್ಯರ್ಥಿಗೆ / ಕಛೇರಿ ಕಡತಕ್ಕೆ.